ಅಸಲು ದಾವಾ ಸಂಖ್ಯೆ - 299/2018
ಪಿಡಬ್ಲ್ಯು - 01
ದಿನಾಂಕಃ 07.10.2023
ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆ - ಶ್ರೀ ಜಿ ಎಂ ಎಂ ವಕೀಲರಿಂದ.**

ಈ ದಾವೆಯಲ್ಲಿ ನಾನು ವಾದಿಯಾಗಿದ್ದು ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ದಿನಾಂಕಃ 31.05.2002 ರಂದು ತಹಶೀಲ್ದಾರ ಸವಣೂರು ಇವರು ನೀಡಿದ ನಿವೇಶನ ಹಕ್ಕು ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಕುರುಬರ ಮಲ್ಲೂರು ಗ್ರಾಮದ 2012-13 ನೇ ಸಾಲಿನ ಆಸ್ತಿ ನಂ.155 ರ ಭೂ ಅಕರಣೆಯಾದಿಯ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಕುರುಬರ ಮಲ್ಲೂರು ಗ್ರಾಮದ 2018-19 ನೇ ಸಾಲಿನ ಆಸ್ತಿ ನಂ.155 ರ ಭೂ ಅಕರಣೆಯಾದಿಯ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ದಿನಾಂಕಃ 05.10.2016 ರ ಠರಾವಿನ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ದಿನಾಂಕಃ 06.08.2015 ರ ಠರಾವಿನ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಈರಪ್ಪ ಇವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ದಿನಾಂಕಃ 23.07.2018 ರಂದು ತಾಲ್ಲೂಕು ಪಂಚಾಯತಿ ನ್ಯಾಯಾಲಯವು ಹೊರಡಿಸಿದ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

5 ತೆರಿಗೆ ಪಾವತಿ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-8 ರಿಂದ 12 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿಕೊಂಡಂತೆ ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ, ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು